ಕರ್ನಾಟಕ ಸರ್ಕಾರ

# ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ

ಕೆ.ಎನ್. ಸ್ಯಾನಿಟೋರಿಯಂ ಕಟ್ಟಡ, ಬಂಗಾರಪೇಟೆ ರಸ್ತೆ, ಕೋಲಾರ – 563102

ಸಂಖ್ಯೆ:ಡಿಟಿಸಿಕೆ/ಎನ್‌ಟಿಇಪಿ/ಗುತ್ತಿಗೆ/STLS/04/2025-26 ದಿನಾಂಕ: 02-01-2026

## "ಪ್ರಕಟಣೆ"

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ (ನೋಂ),- ಕ್ಷಯ ವಿಭಾಗ, ಕೋಲಾರ

ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಕೋಲಾರ ಜಿಲ್ಲೆಗೆ ಗುತ್ತಿಗೆ ಆಧಾರದ ಮೇಲೆ ಬಂಗಾರಪೇಟೆ ಮತ್ತು ಕೆಜಿಎಫ್ ಚಿಕಿತ್ಸಾ ಘಟಕಕ್ಕೆ ಹಿರಿಯ ಕ್ಷಯರೋಗ ಪ್ರಯೋಗಶಾಲಾ ಮೇಲ್ವಿಚಾರಕರ (STLS) ಹುದ್ದೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ಹುದ್ದೆಯ ಹೆಸರು | ಒಟ್ಟು ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ | ಈ ಕೆಳಕಂಡ ಅರ್ಹತೆಗಳನ್ನು ಹೊಂದಿದವರಿಗೆ ಆಧ್ಯತೆ ನೀಡಲಾಗುವುದು | ವಯೋ ಮಿತಿ | ವೇತನ |
|---|---|---|---|---|---|---|
| 01 | ಹಿರಿಯ ಕ್ಷಯರೋಗ ಪ್ರಯೋಗಶಾಲಾ ಮೇಲ್ವಿಚಾರಕರು (Senior Tuberculosis Laboratory Supervisor) | 01 | 1. ಪಿ.ಯು.ಸಿ. ಉತ್ತೀರ್ಣರಾಗಿರಬೇಕು<br>2. ಪದವೀಧರ/ ಡಿಪ್ಲೊಮಾ ಪ್ರಯೋಗಶಾಲಾ ತಂತ್ರಜ್ಞರ (ಮೆಡಿಕಲ್) ಕೋರ್ಸ್‌ಅನ್ನು ಮಾನ್ಯತೆ ಪಡೆದ ಸಂಸ್ಥೆಯಿಂದ ಮಾಡಿರಬೇಕು<br>3. ದ್ವಿ-ಚಕ್ರ ವಾಹನ ಚಲಾಯಿಸಲು ಖಾಯಂ ಚಾಲನಾ ಪರವಾನಗಿಯನ್ನು ಹೊಂದಿರಬೇಕು.<br>4. ಗಣಕಯಂತ್ರದಲ್ಲಿ ಕಾರ್ಯನಿರ್ವಹಿಸುವ 02 ತಿಂಗಳ ತರಬೇತಿಯ ಪ್ರಮಾಣಪತ್ರ ಹೊಂದಿರಬೇಕು. | 1. ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಲ್ಲಿ ಕಾರ್ಯನಿರ್ವಹಿಸಿದವರಿಗೆ ಆಧ್ಯತೆ ನೀಡಲಾಗುವುದು.<br>2. ಪದವಿಯಲ್ಲಿ ಪ್ರಯೋಗಶಾಲಾ ತಂತ್ರಜ್ಞರ ಪ್ರಮಾಣ ಪತ್ರ ಹೊಂದಿದವರಿಗೆ ಆಧ್ಯತೆ ನೀಡಲಾಗುವುದು.<br>3. ಗಣಕಯಂತ್ರ ನಿರ್ವಹಿಸುವ ಸಾಮಾನ್ಯ ಜ್ಞಾನ ಹೊಂದಿರಬೇಕು. | ಗರಿಷ್ಠ 40 ವರ್ಷ | ಮಾಸಿಕ ರೂ.21000/- |

ದಿನಾಂಕ 07-01-2026 ರಂದು ಬೆಳಿಗ್ಗೆ 10.00 ಗಂಟೆಗೆ ಆಸಕ್ತಿಯುಳ್ಳ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ತಮ್ಮ ಮೂಲ ದಾಖಲಾತಿಗಳೊಂದಿಗೆ 01 ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ, ಕೆ.ಎನ್.ಸ್ಯಾನಿಟೋರಿಯಂ ಆಸ್ಪತ್ರೆ ಆವರಣ, ಬಂಗಾರಪೇಟೆ ರಸ್ತೆ, ಕೋಲಾರ ಇಲ್ಲಿಗೆ ಹಾಜರಾಗುವುದು (ಈ ಆಯ್ಕೆಯು ಎನ್.ಹೆಚ್.ಎಂ ನಿಯಮಾವಳಿ ಷರತ್ತು ಮತ್ತು ನಿಬಂಧನೆಗೊಳಪಟ್ಟಿರುತ್ತದೆ)

ಸೂಚನೆ:

1) ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಯಾದರೂ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.
2) ರೋಸ್ಟರ್ ಕಂ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
3) ನೇರ ಸಂದರ್ಶನದ ದಿನಾಂಕದಂದು ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ಗಂಟೆಯೊಳಗಾಗಿ ಸಂದರ್ಶನ ಸ್ಥಳದಲ್ಲಿ ಹೆಸರನ್ನು ನೋಂದಾಯಿಸಿಕೊಂಡ ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಪರಿಗಣಿಸಲಾಗುವುದು.
4) ನೇರ ಸಂದರ್ಶನದ ದಿನಾಂಕದಂದು ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ಗಂಟೆಯೊಳಗಾಗಿ ಅರ್ಜಿಯನ್ನು ಪಡೆದು ಅದರಂತೆ ಎಸ್.ಎಸ್.ಎಲ್.ಸಿ / ಪಿ.ಯು.ಸಿ/ ಪದವೀಧರ/ಡಿಎಂಎಲ್‌ಟಿ ಕೋರ್ಸ್‌ನ ಅಂಕ ಪಟ್ಟಿಗಳು, ಕೋರ್ಸ್ ಕಂಪ್ಲೀಷನ್ ಸರ್ಟಿಫಿಕೆಟ್, ಜಾತಿ ಪ್ರಮಾಣ ಪತ್ರ, ಕಂಪ್ಯೂಟರ್ ಲಿಟ್ರೆಸಿ ಪ್ರಮಾಣ ಪತ್ರ, ಅನುಭವ ಪ್ರಮಾಣ ಪತ್ರ ಇತರೆ ಎಲ್ಲಾ ದಾಖಲಾತಿಗಳನ್ನು ಹಾಜರುಪಡಿಸುವುದು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು,
ಕೋಲಾರ ಜಿಲ್ಲೆ, ಕೋಲಾರ

ಕರ್ನಾಟಕ ಸರ್ಕಾರ

# ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ

ಕೆ.ಎನ್. ಸ್ಯಾನಿಟೋರಿಯಂ ಕಟ್ಟಡ, ಬಂಗಾರಪೇಟೆ ರಸ್ತೆ, ಕೋಲಾರ – 563102

ಸಂಖ್ಯೆ:ಡಿಟಿಸಿಕೆ/ಎನ್‌ಟಿಇಪಿ/ಗುತ್ತಿಗೆ/STLS/04/2025-26 ದಿನಾಂಕ: 02-01-2026

ರವರಿಗೆ,

ಹಿರಿಯ ಸಹಾಯಕ ನಿರ್ದೇಶಕರು,
ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ,
ಕೋಲಾರ ಜಿಲ್ಲೆ, ಕೋಲಾರ

ಮಾನ್ಯರೆ,

ವಿಷಯ: ರಾಷ್ಟ್ರೀಯ ಕ್ಷಯರೋಗ ನಿವಾರಣಾ ಕಾರ್ಯಕ್ರಮದಡಿಯಲ್ಲಿ ಬಂಗಾರಪೇಟೆ ಮತ್ತು ಕೆಜಿಎಫ್ ಚಿಕಿತ್ಸಾ ಘಟಕ ಇಲ್ಲಿಗೆ "ಹಿರಿಯ ಕ್ಷಯರೋಗ ಪ್ರಯೋಗಶಾಲಾ ಮೇಲ್ವಿಚಾರಕರ (**STLS**)" ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಆಯ್ಕೆ ಮಾಡುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ರಾಷ್ಟ್ರೀಯ ಕ್ಷಯರೋಗ ನಿವಾರಣಾ ಕಾರ್ಯಕ್ರಮದಡಿಯಲ್ಲಿ ಬಂಗಾರಪೇಟೆ ಮತ್ತು ಕೆಜಿಎಫ್ ಚಿಕಿತ್ಸಾ ಘಟಕ ಇಲ್ಲಿಗೆ "ಹಿರಿಯ ಕ್ಷಯರೋಗ ಪ್ರಯೋಗಶಾಲಾ ಮೇಲ್ವಿಚಾರಕರ (**STLS**)" ಹುದ್ದೆಗೆ ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಲು ಈ ಪತ್ರಕ್ಕೆ ಲಗತ್ತಿಸಿರುವ ಪತ್ರಿಕಾ ಪ್ರಕಟಣೆಯನ್ನು ಉಚಿತವಾಗಿ ಸುದ್ದಿ ರೂಪದಲ್ಲಿ ಪ್ರಕಟಿಸಲು ಈ ಮೂಲಕ ಕೋರಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು,
ಕೋಲಾರ ಜಿಲ್ಲೆ, ಕೋಲಾರ

ಕರ್ನಾಟಕ ಸರ್ಕಾರ

# ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ

ಕೆ.ಎನ್. ಸ್ಯಾನಿಟೋರಿಯಂ ಕಟ್ಟಡ, ಬಂಗಾರಪೇಟೆ ರಸ್ತೆ, ಕೋಲಾರ – 563102

ಸಂಖ್ಯೆ:ಡಿಟಿಸಿಕೆ/ಎನ್‌ಟಿಇಪಿ/ಗುತ್ತಿಗೆ/STLS/04/2025-26 ದಿನಾಂಕ: 02-01-2026

ರವರಿಗೆ,

ಮಾನ್ಯ ಜಿಲ್ಲಾಧಿಕಾರಿಗಳು,
ಕೋಲಾರ ಜಿಲ್ಲೆ, ಕೋಲಾರ

ಮಾನ್ಯರೆ,

ವಿಷಯ: ರಾಷ್ಟ್ರೀಯ ಕ್ಷಯರೋಗ ನಿವಾರಣಾ ಕಾರ್ಯಕ್ರಮದಡಿಯಲ್ಲಿ ಬಂಗಾರಪೇಟೆ ಮತ್ತು ಕೆ.ಜಿ.ಎಫ್. ಚಿಕಿತ್ಸಾ ಘಟಕ ಇಲ್ಲಿಗೆ "ಹಿರಿಯ ಕ್ಷಯರೋಗ ಪ್ರಯೋಗಶಾಲಾ ಮೇಲ್ವಿಚಾರಕರ (**STLS**)" ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ:- (1) ಮಾನ್ಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಜಿಲ್ಲಾ ಪಂಚಾಯತ್, ಕೋಲಾರ ರವರ ಅನುಮೋದನೆಯಂತೆ

*******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಿತ ಪತ್ರದನ್ವಯ ಕೋಲಾರ ಜಿಲ್ಲೆಯ ರಾಷ್ಟ್ರೀಯ ಕ್ಷಯರೋಗ ನಿವಾರಣಾ ಕಾರ್ಯಕ್ರಮದಡಿಯಲ್ಲಿ ಬಂಗಾರಪೇಟೆ ಮತ್ತು ಕೆ.ಜಿ.ಎಫ್. ಚಿಕಿತ್ಸಾ ಘಟಕ ಇಲ್ಲಿಗೆ "ಹಿರಿಯ ಕ್ಷಯರೋಗ ಪ್ರಯೋಗಶಾಲಾ ಮೇಲ್ವಿಚಾರಕರ (**STLS**)" ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಲು ಆಹ್ವಾನಿಸಲಾಗಿದ್ದು ಸದರಿ ಹುದ್ದೆಯ ವಿವರ, ವಿದ್ಯಾರ್ಹತೆ, ವೇತನದ ಸಂಪೂರ್ಣ ಮಾಹಿತಿಗಳನ್ನು https://Kolar.nic.in/en/noticecategory/recruitments/ಕೋಲಾರ ಜಿಲ್ಲಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ತಮ್ಮಲ್ಲಿ ಕೋರಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು,
ಕೋಲಾರ ಜಿಲ್ಲೆ, ಕೋಲಾರ